## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಸೆಕ್ಷನ್ 13 ಮತ್ತು 16ರ ಪ್ರಕಾರ ಪುನರ್ವಸತಿ ಕಲ್ಪಿಸಲು ಸಮಗ್ರ ಯೋಜನೆಯ ರೂಪಿಸುವ ಬಗ್ಗೆ.

ಉಲ್ಲೇಖ:
1. ಮಾನ್ಯ ಉಚ್ಛ ನ್ಯಾಯಾಲಯದ ಪ್ರಕರಣ ಸಂಖ್ಯೆ. 8928/2020 (ಪಿಐಎಲ್) ಅನುಸರಣಾ ವರದಿಯನ್ನು ಸಲ್ಲಿಸುವ ಕುರಿತು.
2. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದವರ ಪತ್ರ ಸಂಖ್ಯೆ: ಕರಾಸಕಆ/ಎಸ್-9/ ಎಂ.ಎಸ್.ಕಾ.ಸೆ-13/ ಪ್ರಸ್ತಾವನೆ /2020-21, ದಿನಾಂಕ: 20.03.2021

*****

ಪ್ರಸ್ತಾವನೆ:-

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ, ಪ್ರಕರಣದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಸೆಕ್ಷನ್ 13 ಮತ್ತು 16ರನ್ವಯ ಸಮಗ್ರ ಪುನರ್ವಸತಿ ಯೋಜನೆಯ ಅನುಷ್ಠಾನಗೊಳಿಸಲು ಮಾನ್ಯ ಕರ್ನಾಟಕದ ಉಚ್ಛ ನ್ಯಾಯಾಲಯದ ಪ್ರಕರಣ ಸಂಖ್ಯೆ. 8928/2020 (ಪಿಐಎಲ್) ದಿನಾಂಕ: 16.03.2021ರಲ್ಲಿ ನಿರ್ದೇಶನ ನೀಡಿದೆ. ಅದರಂತೆ ಸರ್ಕಾರದಿಂದ ಕ್ರಮ ಜರುಗಿಸಿ ಆದೇಶ ಹೊರಡಿಸಬೇಕಾಗಿರುತ್ತದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಪತ್ರದಲ್ಲಿ ರಾಜ್ಯದ ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟಲ್ಲಿ ಅವರ ಕುಟುಂಬದ ಅವಲಂಬಿತರಿಗೆ ಎಂ.ಎಸ್ ಕಾಯ್ದೆ 2013ರ ಸೆಕ್ಷನ್ 13 ಮತ್ತು 16ರ ಪ್ರಕಾರ ಪುನರ್ವಸತಿಯನ್ನು ಕಲ್ಪಿಸಲು ಸಮಗ್ರ ಯೋಜನೆಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿ ಸೂಕ್ತ ಆದೇಶ ಹೊರಡಿಸುವಂತೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರು ಕೋರಿರುತ್ತಾರೆ. ಅದರಂತೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಸಕಇ 139 ಎಸ್‌ಡಿಸಿ 2021, ಬೆಂಗಳೂರು, ದಿನಾಂಕ:24-03-2021

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ 2013ರ ಸೆಕ್ಷನ್ 13 ಮತ್ತು 16ರನ್ವಯ ರಾಜ್ಯದ ನಗರ ಹಾಗೂ ಗ್ರಾಮೀಣ ಭಾಗದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟ ಕುಟುಂಬದ

ಅವಲಂಬಿತರಿಗೆ ಈ ಆದೇಶದೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ನಮೂದಿಸಿರುವಂತೆ ಪುನರ್ವಸತಿ ಕಲ್ಪಿಸಲು ಅನುಮೋದನೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

24/3/2021
(ಪಿ.ಎನ್.ನಾಗರಾಜ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು (ಎ ಮತ್ತು ಇ)(ಲೆಕ್ಕಪರಿಶೋಧನೆ-2 & 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ ಇಲಾಖೆ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿ, ವಸತಿ ಇಲಾಖೆ, ಬೆಂಗಳೂರು.
9. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
10. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
11. ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
12. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
13. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
14. ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
15. ಅಧ್ಯಕ್ಷರು/ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ, ಬೆಂಗಳೂರು.
16. ಆಯುಕ್ತರು, ಪಂಚಾಯತ್ ರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
17. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
18. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
19. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ, ಬೆಂಗಳೂರು.

20. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
21. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್.
22. ಎಲ್ಲಾ ಮಹಾನಗರ ಪಾಲಿಕೆಯ ಆಯುಕ್ತರು (ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಒಳಗೊಂಡಂತೆ) ಮತ್ತು ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಯ ಆಯುಕ್ತರು, ಪೌರಾಯುಕ್ತರು ಮತ್ತು ಮುಖ್ಯಾಧಿಕಾರಿಗಳು. (ನಗರಾಭಿವೃದ್ಧಿ ಮುಖಾಂತರ)
23. ಶಾಖಾ ರಕ್ಷಾಕಡತ/ ಹೆಚ್ಚುವರಿ ಪ್ರತಿ

*****

# ಅನುಬಂಧ–1

**ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ನೇಮಕಾತಿ ನಿಷೇಧ ಮತ್ತು ಅವರ ಪುನರ್ವಸತಿ ಅಧಿನಿಯಮ 2013ರ ಸೆಕ್ಷನ್ 13 ಮತ್ತು 16ರಂತೆ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದ ಅವಲಬಿತರಿಗೆ ಪುನರ್ವಸತಿ ಕಲ್ಪಿಸುವ ಸಮಗ್ರ ಯೋಜನೆ.**

| ಸೆಕ್ಷನ್ | ಪುನರ್ವಸತಿ ಅಂಶ | ಕ್ರಮವಹಿಸಬೇಕಾದ ಇಲಾಖೆ/ ಅಧಿಕಾರಿಗಳು | ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಜಾಗೃತಿ ಸಮಿತಿಯ ಜವಾಬ್ದಾರಿ | ರಾಜ್ಯ ಮಟ್ಟದ ಮೇಲ್ವಿಚಾರಣಾ ಸಮಿತಿಯ ಜವಾಬ್ದಾರಿ |
|---|---|---|---|---|
| **13(1) (a)(i)** | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ (ಗುಮ್ಯಾಸ್ಕ್ಯಾ) ಹಾಗೂ ಅವರ ಅವಲಂಬಿತರಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದ ಎಲ್ಲಾ ಸದಸ್ಯರುಗಳ ವಿವರಗಳೊಂದಿಗೆ ಭಾವಚಿತ್ರ ಗಳನ್ನೊಂದಿರುವ ಒಂದು ಗುರುತಿನ ಚೀಟಿಯನ್ನು ನೀಡುವ ಬಗ್ಗೆ. | **ನಗರ ಪ್ರದೇಶದಲ್ಲಿ,**<br>➢ ಪಟ್ಟಣ ಪಂಚಾಯಿತಿ, ಪುರಸಭೆ ವ್ಯಾಪ್ತಿಯಲ್ಲಿ –ಮುಖ್ಯಾಧಿಕಾರಿಗಳು.<br>➢ ನಗರಸಭೆ ವ್ಯಾಪ್ತಿಯಲ್ಲಿ– ಪೌರಾಯುಕ್ತರು. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ– ಆಯುಕ್ತರು.<br>➢ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ– ಆಯಾ ವಲಯದ ಜಂಟಿ ಆಯುಕ್ತರು, ಬಿಬಿಎಂಪಿ.<br>**ಗ್ರಾಮೀಣ ಭಾಗದಲ್ಲಿ,**<br>ಆಯಾ ತಾಲ್ಲೂಕಿನ ತಾಲ್ಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳು.<br><br>ಗುರುತಿನ ಚೀಟಿಯ ನಮೂನೆಯನ್ನು **ಅನುಬಂಧ–2**ರಲ್ಲಿ ನೀಡಿದೆ. | ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು ಮತ್ತು ಉಪವಿಭಾಗ ಮಟ್ಟದ ಜಾಗೃತಿ ಸಮಿತಿಯ ಅಧ್ಯಕ್ಷರಾದ ಉಪವಿಭಾಗಾಧಿಕಾರಿಗಳು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಗುರುತಿನ ಚೀಟಿಯನ್ನು ನೀಡಿರುವ ಬಗ್ಗೆ 3 ತಿಂಗಳಿಗೊಮ್ಮೆ ನಡೆಯುವ ಸಮಿತಿ ಸಭೆಯಲ್ಲಿ ಪರಿಶೀಲನೆ ಮಾಡಿ ಅಗತ್ಯ ಕ್ರಮಜರುಗಿಸುವುದು. | ರಾಜ್ಯ ಮಟ್ಟದಲ್ಲಿ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ (ಗುಮ್ಯಾಸ್ಕ್ಯಾ) ಗುರುತಿನ ಚೀಟಿ ನೀಡಿರುವ ಬಗ್ಗೆ ಮೇಲ್ವಿಚಾರಣೆ ಮಾಡುವುದು. |
| **13(1) (a)(ii)** | ಒಂದು ಬಾರಿ ಆರಂಭದಲ್ಲಿ ನಗದು ಸಹಾಯವನ್ನು ನೀಡುವ ಬಗ್ಗೆ | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಕುಟುಂಬದ ಒಬ್ಬರಿಗೆ, ಸರ್ಕಾರ ನಿಗದಿ ಪಡಿಸಿದರೂ.40,000/– ನಗದುವನ್ನು ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಹಣಕಾಸು ಹಾಗೂ ಅಭಿವೃದ್ಧಿ ನಿಗಮದಿಂದ ನೀಡುವ ಬಗ್ಗೆ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ | ಒಂದು ಬಾರಿ ನಗದು ಸಹಾಯ ನೀಡಲು ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಹಣಕಾಸು ಹಾಗೂ ಅಭಿವೃದ್ಧಿ ನಿಗಮಕ್ಕೆ ಕಳುಹಿಸಿರುವ ಬಗ್ಗೆ ಮತ್ತು ನಗದು ಫಲಾನುಭವಿಗಳ | ಒಂದು ಭಾರಿ ನಗದು ಸಹಾಯಧನವನ್ನು ಬಂದಿರುವ ಬಗ್ಗೆ ಅಂಕಿ–ಅಂಶಗಳನ್ನು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮರವರು ರಾಜ್ಯ |

| | | | | |
|---|---|---|---|---|
| | | ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಬಿಬಿಎಂಪಿ ವ್ಯಾಪ್ತಿಯಲ್ಲಿ ಆಯುಕ್ತರು/ ವಿಶೇಷ ಆಯುಕ್ತರು (ಕಲ್ಯಾಣ)ರವರು ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಹಣಕಾಸು ಹಾಗೂ ಅಭಿವೃದ್ಧಿ ನಿಗಮಕ್ಕೆ ಪಟ್ಟಿಯನ್ನು ಅಪ್‌ಲೋಡ್ ಮಾಡುವುದು.<br><br>ವೆಬ್‌ಸೈಟ್‌ನಲ್ಲಿ ಪಟ್ಟಿ ಪ್ರಕಟಿಸಿದ **ಒಂದು ತಿಂಗಳ ಒಳಗಾಗಿ** ಪಟ್ಟಿಯನ್ನು ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಹಣಕಾಸು ಹಾಗೂ ಅಭಿವೃದ್ಧಿ ನಿಗಮಕ್ಕೆ ಅರ್ಜಿದಾರರ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಅರ್ಜಿ ನಮೂನೆಯಲ್ಲಿ ಕೇಳಿರುವ ಮಾಹಿತಿಯೊಂದಿಗೆ ಕಳುಹಿಸಿಕೊಡುವುದು. | ಬ್ಯಾಂಕ್ ಖಾತೆಗೆ ಜಮಾ ಮಾಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವುದು. | ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಮಂಡಿಸುವುದು. |
| 13(1) (b) | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಮಕ್ಕಳಿಗೆ ಶಾಲೆ/ ಕಾಲೇಜು ಪ್ರವೇಶ ವ್ಯವಸ್ಥೆ ಮತ್ತು ವಿದ್ಯಾರ್ಥಿ ವೇತನ ನೀಡುವ ಬಗ್ಗೆ. | ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆರವರು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಮಕ್ಕಳಿಗೆ ಶಾಲೆ/ ಕಾಲೇಜು ಪ್ರವೇಶ ವ್ಯವಸ್ಥೆ ಮಾಡುವುದು. ಮತ್ತು ವಿದ್ಯಾರ್ಥಿ ವೇತನ ನೀಡುವ ಬಗ್ಗೆ ಈ ಕೆಳಕಂಡ ಯೋಜನೆಗಳಡಿ ಕ್ರಮವಹಿಸುವುದು.<br>1. ಸಮಾಜ ಕಲ್ಯಾಣ ಇಲಾಖೆಯಡಿ ಅನೈರ್ಮಲ್ಯ ವೃತ್ತಿಯಲ್ಲಿ ತೊಡಗಿರುವ ಮಕ್ಕಳಿಗೆ ನೀಡುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನದಡಿಯಲ್ಲಿ ವಿದ್ಯಾರ್ಥಿ ವೇತನ ನೀಡುವುದು.<br>2. ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳಿಗೆ ಶಾಲೆ/ ಕಾಲೇಜು ಪ್ರವೇಶ ವ್ಯವಸ್ಥೆ ಮಾಡಿರುವ ಮತ್ತು ವಿದ್ಯಾರ್ಥಿ ವೇತನ ನೀಡಿರುವ ಬಗ್ಗೆ ಉಸ್ತುವಾರಿ ಮಾಡುವುದು. | ಆಯುಕ್ತರು ಸಮಾಜ ಕಲ್ಯಾಣ ಇಲಾಖೆರವರು ಜಿಲ್ಲಾ ಮಟ್ಟದಲ್ಲಿ ನೀಡುತ್ತಿರುವ ವಿದ್ಯಾರ್ಥಿ ವೇತನ ಮತ್ತು ಶುಲ್ಕ ಮರುಪಾವತಿಯ ಬಗ್ಗೆ ಮೇಲ್ವಿಚಾರಣೆ ಮಾಡುವುದು ಹಾಗೂ ಸಲಹೆ ಸೂಚನೆ ನೀಡುವುದು ಮತ್ತು ರಾಜ್ಯ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಮಂಡಿಸುವುದು. |

| | | | | |
|---|---|---|---|---|
| | | ವಸತಿ ಶಿಕ್ಷಣ ಸಂಸ್ಥೆಯಡಿ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಮತ್ತು ಆಶ್ರಮ ಶಾಲೆಗಳಲ್ಲಿ ಪ್ರವೇಶಾತಿ ನೀಡುವುದು.<br>3. ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳಿಗೆ ಶೈಕ್ಷಣಿಕವಾಗಿ ಉತ್ತೇಜನ ನೀಡಲು ಹಾಗೂ ಅವರ ಮಕ್ಕಳಿಗೆ ಉತ್ತಮವಾದ ಶಿಕ್ಷಣವನ್ನು ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ನೀಡುವ ಯೋಜನೆ/ ಕಾರ್ಯಕ್ರಮ.<br>1. ಎಲ್.ಕೆ.ಜಿ ಯಿಂದ 5ನೇ ತರಗತಿಯವರೆಗೆ ವಸತಿ ರಹಿತ<br>2. 6ನೇ ತರಗತಿಯಿಂದ 10ನೇ ತರಗತಿಯವರಿಗೆ ವಸತಿ ಸಹಿತ.<br>4. ನಗರ ಸ್ಥಳೀಯ ಸಂಸ್ಥೆಗಳಲ್ಲಿರುವ ಮೀಸಲಿರುವ 24.10%ರ ಅನುದಾನದಡಿ ವಿದ್ಯಾರ್ಥಿ ವೇತನ ನೀಡುವುದು. | | |
| **13(1) (c)** | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದರಿಗೆ ನಿವೇಶನ ಮತ್ತು ಮನೆಯನ್ನು ಮಂಜೂರು ಮಾಡುವ ಬಗ್ಗೆ. | • **<u>ನಿವೇಶನ ಇಲ್ಲದಿದ್ದಲ್ಲಿ,</u>**<br>ಜಿಲ್ಲಾಧಿಕಾರಿಗಳು ನಿವೇಶನಗಳಿಲ್ಲದಿರುವ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದರಿಗೆ, ಗ್ರಾಮೀಣ ಪ್ರದೇಶದಲ್ಲಿ 30*40, ಮತ್ತು ನಗರ ಪ್ರದೇಶದಲ್ಲಿ 20*30 ನಿವೇಶನಗಳನ್ನು ಒದಗಿಸುವುದು.<br>ಸ್ಥಳೀಯ ಸಂಸ್ಥೆಗಳು/ ಪ್ರಾಧಿಕಾರಗಳು ಬಡಾವಣೆಗಳನ್ನು ನಿರ್ಮಿಸಿದಲ್ಲಿ ಸದರಿ ಬಡಾವಣೆಗಳಲ್ಲಿ ನಿವೇಶನ ಕಲ್ಪಸುವುದು. ನಿವೇಶನಗಳನ್ನು ಉಚಿತವಾಗಿ ನೀಡತಕ್ಕದ್ದು. ಒಂದು ವೇಳೆ ಹಣ ನೀಡಬೇಕಾದಲ್ಲಿ, ಸ್ಥಳೀಯ ಸಂಸ್ಥೆಗಳ 24.10%ರ 20% ಅನುದಾನದಲ್ಲಿ ಭರಿಸುವುದು. | ಜಿಲ್ಲಾ ಮಟ್ಟದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡುವ ಬಗ್ಗೆ ಮತ್ತು ಹಂಚಿಕೆಯಾದ ನಿವೇಶಗಳಿಗೆ ಮತ್ತು ನಿವೇಶನ ಹೊಂದಿರುವಂತಹ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಕುಟುಂಬದವರಿಗೆ ವಸತಿ ಸೌಲಭ್ಯ ಕಲ್ಪಿಸಿರುವ ಬಗ್ಗೆ ಅಂಕಿ-ಅಂಶ ನಿರ್ವಹಣೆ ಮತ್ತು ಉಸ್ತುವಾರಿ ಮಾಡುವುದು. | ರಾಜ್ಯ ಮಟ್ಟದಲ್ಲಿ ನಿವೇಶನಗಳನ್ನು ಹಂಚಿಕೆ ಮಾಡುವ ಬಗ್ಗೆ ಮತ್ತು ಹಂಚಿಕೆಯಾದ ನಿವೇಶಗಳಿಗೆ ಮತ್ತು ನಿವೇಶನ ಹೊಂದಿರುವಂತಹ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಕುಟುಂಬದವರಿಗೆ ವಸತಿ ಸೌಲಭ್ಯ ಕಲ್ಪಿಸಿರುವ ಬಗ್ಗೆ ಅಂಕಿ-ಅಂಶ ನಿರ್ವಹಣೆ ಮತ್ತು ಉಸ್ತುವಾರಿ ಮಾಡುವುದು. |

| | | | | |
|---|---|---|---|---|
| | | • **<u>ಮನೆ ಮಂಜೂರಾತಿ,</u>**<br>ಗ್ರಾಮೀಣ ಪ್ರದೇಶದಲ್ಲಿ ಮತ್ತು ನಗರ ಪ್ರದೇಶದಲ್ಲಿ ವಸತಿ ರಹಿತರಿಗೆಡಾ||. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆಯಡಿ ಮಂಜೂರು ಮಾಡಲು ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು ಫಲಾನುಭವಿಗಳನ್ನು ಆಯ್ಕೆ ಮಾಡುವುದು.<br>ಜಿಲ್ಲಾಧಿಕಾರಿಗಳ ಆದೇಶದಂತೆ ರಾಜೀವ್ ಗಾಂಧಿ ವಸತಿ ನಿಗಮದಿಂದ ಮನೆಗಳನ್ನು ಮಂಜೂರು ಮಾಡಲು ಕ್ರಮವಹಿಸುವುದು.<br>ನಗರ ಪ್ರದೇಶದಲ್ಲಿ, ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿ ಮನೆಗಳನ್ನು ಮಂಜೂರು ಮಾಡಲು ಜಿಲ್ಲಾಧಿಕಾರಿಗಳು ಕ್ರಮವಹಿಸುವುದು.<br>• **<u>ಹಳೇ ಮನೆ ದುರಸ್ತಿಮತ್ತು ಹೆಚ್ಚುವರಿಕಟ್ಟಡ ನಿರ್ಮಿಸುವ ಬಗ್ಗೆ,</u>**<br>ಅವಶ್ಯಕತೆಗೆ ಅನುಗುಣವಾಗಿ ಸಹಾಯಧನವನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳು ನಿಗಧಿಪಡಿಸಿರುವ 24.10%ರ ಅನುದಾನದಲ್ಲಿ ಸಹಾಯಧನ ನೀಡುವುದು. | | |
| **13(1) (d)** | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದ ಅವಲಂಬಿತರಿಗೆ ಕೌಶಲ್ಯ ತರಬೇತಿಯನ್ನು ನೀಡುವ ಬಗ್ಗೆ ಮತ್ತು ತರಬೇತಿಯ ಅವಧಿಯಲ್ಲಿ ಮಾತ್ರ ಮೂರು ಸಾವಿರದ ರೂಪಾಯಿಗಳಂಗಿಂತಲೂ ಕಡಿಮೆಯಿಲ್ಲದ ವೃತ್ತಿ ವೇತನವನ್ನು ಪ್ರತಿ ತಿಂಗಳು ನೀಡುವ ಬಗ್ಗೆ | ಕೌಶಲ್ಯ ತರಬೇತಿಗೆ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಅರ್ಜಿಗಳನ್ನು ಆಹ್ವಾನಿಸಿ ಫಲಾನುಭವಿಗಳನ್ನು ಆಯ್ಕೆ ಮಾಡಿ ತರಬೇತಿ ನೀಡುವುದು. ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ನಡೆಸಲಾಗುತ್ತಿರುವ ತರಬೇತಿ ಸಂಸ್ಥೆಗಳಲ್ಲಿ ತರಬೇತಿ ನೀಡಲು ವ್ಯವಸ್ಥೆ ಮಾಡುವುದು.<br><br>ತರಬೇತಿಯನ್ನು ಫಲಾನುಭವಿಗಳಿಗೆ | ಜಿಲ್ಲಾ ಮಟ್ಟದ ಜಾಗೃತಿ ಸಮಿತಿ ಜಿಲ್ಲಾ ಮಟ್ಟದ ಸ್ಥಳೀಯ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿಗಳನ್ನು ಏರ್ಪಡಿಸಿ ತರಬೇತಿ ನೀಡುವುದು.<br>ಆಯಾ ಸ್ಥಳೀಯ ಸಂಸ್ಥೆಗಳು ತರಬೇತಿ ವೆಚ್ಚವನ್ನು ಮತ್ತು ಫಲಾನುಭವಿಗಳಿಗೆ ನಿಗಧಿತ ವೇತನವನ್ನು (ಸ್ಟೈಫಂಡ್) | ರಾಜ್ಯ ಮಟ್ಟದ ಮೇಲ್ವಿಚಾರಣಾ ಸಮಿತಿ ಕೌಶಲ್ಯ ತರಬೇತಿಗಳನ್ನು ನೀಡುತ್ತಿರುವ ಬಗ್ಗೆ ಪರಿಶೀಲಿಸಿ ಕಾಲ ಕಾಲಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡುವುದು. |

| | | | | |
|---|---|---|---|---|
| | | ಉಚಿತವಾಗಿ ನೀಡುವುದು.<br>ಸ್ಥಳೀಯ ಸಂಸ್ಥೆಗಳು/ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ/ ಮಂಡಳಿಗಳೂ ಸಹ ತರಬೇತಿಗಳನ್ನು ಆಯೋಜಿಸುವುದು ಮತ್ತು ತರಬೇತಿದಾರರಿಗೆ 24.10%ರಡಿ ಇರುವ ಅನುದಾನದಿಂದ ಸ್ಟೈಫಂಡ್ ನೀಡುವುದು.<br><br>ಕೌಶಲ್ಯಾಭಿವೃದ್ಧಿ. ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಅನುದಾನದಲ್ಲಿ ವೆಚ್ಚವನ್ನು ಭರಿಸುವುದು. | ನೀಡುವುದು<br><br>ಪ್ರತಿ ಮೂರು ತಿಂಗಳಿಗೊಮ್ಮೆ ನಡೆಯುವ ಸಭೆಯಲ್ಲಿ ತರಬೇತಿ ಮತ್ತು ತರಬೇತಿ ಅವಧಿಯಲ್ಲಿ ಅವರಿಗೆ ವೃತ್ತಿ ವೇತನವನ್ನು ಸಂಧಾಯ ಮಾಡಿದ ಬಗ್ಗೆ ಅಂಕಿ-ಅಂಶ ನಿರ್ವಹಣೆ ಮತ್ತು ಉಸ್ತುವಾರಿ ಮಾಡುವುದು. | |
| **13(1) (e)** | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದರಿಗೆ ಒಂದು ಪರ್ಯಾಯದ ಉದ್ಯೋಗವನ್ನು ಕಲ್ಪಿಸಲು ಸಹಾಯಧನ ಮತ್ತು ರಿಯಾಯಿತಿ ಸಾಲವನ್ನು ನೀಡುವುದು. | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮದಿಂದ ಅವಲಂಬಿತರಿಗೆ ಸ್ವಯಂ ಉದ್ಯೋಗದ ಸಲುವಾಗಿ ಈಗಾಗಲೇ ನಿಗಮದಲ್ಲಿ ಜಾರಿಯಲ್ಲಿರುವ ಯೋಜನೆಗಳಲ್ಲಿ ಸಾಲ ಸಹಾಯಧನವನ್ನು ಕಡ್ಡಾಯವಾಗಿ ನೀಡುವುದು.<br><br>ಸ್ವಯಂ ಉದ್ಯೋಗಕ್ಕಾಗಿ ಸಮಾಜ ಕಲ್ಯಾಣ ಇಲಾಖೆಯಲ್ಲಿ 4% ಬಡ್ಡಿದರದಲ್ಲಿ ಕೆ.ಎಸ್.ಎಫ್.ಸಿ ಮತ್ತು ಬ್ಯಾಂಕ್‌ಗಳಿಂದ ಸಾಲ ಪಡೆಯುವ ಬಗ್ಗೆ ಫಲಾನುಭವಿಗಳಿಗೆ ಸಹಾಯ ಮಾಡುವುದು.<br><br>ಸ್ಥಳೀಯ ಸಂಸ್ಥೆಗಳೂ ಸಹ ಪರ್ಯಾಯ ಉದ್ಯೋಗವನ್ನು ಕಲ್ಪಿಸುವ ಬಗ್ಗೆ ಕ್ರಮವಹಿಸುವುದು. | ಅವಲಂಬಿತರನ್ನು ಆಯ್ಕೆ ಮಾಡಿ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮಕ್ಕೆ ಸಲ್ಲಿಸುವುದು. | ಸಾಲ ಸಹಾಯಧನ ನೀಡುವ ಬಗ್ಗೆ ಅಂಕಿ-ಅಂಶಗಳನ್ನು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮರವರು ರಾಜ್ಯ ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ಮಂಡಿಸುವುದು. ಮೇಲ್ವಿಚಾರಣಾ ಸಮಿತಿಯು ಕಾಲ ಕಾಲಕ್ಕೆ ಸೂಕ್ತ ನಿರ್ದೇಶನಗಳನ್ನು ನೀಡುವುದು. |

| | | | | |
|---|---|---|---|---|
| 13(1) (f) | ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದರಿಗೆ ಕಾನೂನು ಮತ್ತು ಕ್ರಮಬದ್ಧವಾದ ನೆರವನ್ನು ಒದಗಿಸುವ ಬಗ್ಗೆ. | ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಮತ್ತು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯ ನಿರ್ವಹಿಸುವಾಗ ಮೃತಪಟ್ಟವರ ಕುಟುಂಬದರಿಗೆ ಕಾನೂನು ನೆರವುಬೇಕಾದಲ್ಲಿ ಆ ಬಗ್ಗೆ ಪರಿಶೀಲಿಸಿ ರಾಜ್ಯ ಕಾನೂನು ಪ್ರಾಧಿಕಾರದ ಸಹಯೋಗದೊಂದಿಗೆ ಕ್ರಮವಹಿಸುವುದು. | ಜಿಲ್ಲಾ ಮಟ್ಟದಲ್ಲಿ ಕಾನೂನು ಮತ್ತು ಕ್ರಮಬದ್ಧವಾದ ನೆರವನ್ನು ಪಡೆಯುವ ಬಗ್ಗೆ ಜಿಲ್ಲಾ ಕಾನೂನು ಪ್ರಾಧಿಕಾರದ ಸಹಯೋಗದೊಂದಿಗೆ ಕ್ರಮವಹಿಸುವುದು. | ರಾಜ್ಯ ಮಟ್ಟದಲ್ಲಿ ಕಾನೂನು ಮತ್ತು ಕ್ರಮಬದ್ಧವಾದ ನೆರವನ್ನು ಪಡೆಯುವ ಬಗ್ಗೆ ರಾಜ್ಯ ಕಾನೂನು ಪ್ರಾಧಿಕಾರದ ಸಹಯೋಗದೊಂದಿಗೆಕ್ರಮ ವಹಿಸುವುದು. |
| 13(2) | 1. ರಾಜ್ಯ ಮಟ್ಟದಲ್ಲಿ ಸಮಾಜ ಕಲ್ಯಾಣ ಇಲಾಖೆ ಪುನರ್ವಸತಿ ಕುರಿತು ಅಧೀನ ಅಧಿಕಾರಿಗಳಿಗೆ, ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳಿಗೆ ಕಾಲಕಾಲಕ್ಕೆ ಸೂಕ್ತ ನಿರ್ದೇಶನ ನೀಡಿ ಪುನರ್ವಸತಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಿರ್ವಹಿಸಲು ಕ್ರಮವಹಿಸುವುದು.<br>2. ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಸಹ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧಿನಿಯಮ 2012ರಂತೆ ಪುನರ್ವಸತಿ ಕಲ್ಪಿಸಿರುವ ಬಗ್ಗೆ ಮೇಲ್ವಿಚಾರಣೆ ಮಾಡುವುದು.<br>3. ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಮಟ್ಟದ ಜಾಗೃತಿ ಸಮಿತಿಯ ಅಧ್ಯಕ್ಷರಾದ ಜಿಲ್ಲಾದಂಡಾಧಿಕಾರಿಗಳು/ ಜಿಲ್ಲಾಧಿಕಾರಿಗಳು ಪುನರ್ವಸತಿ ಕಲ್ಪಿಸುವ ಬಗ್ಗೆ ಸಂಪೂರ್ಣ ಜವಾಬ್ದಾರಿಯನ್ನು ವಹಿಸುವುದು.<br>4. ರಾಜ್ಯ ಮಟ್ಟದ ಮೇಲ್ವಿಚಾರಣಾ ಸಮಿತಿಯು ಪುನರ್ವಸತಿ ಕಲ್ಪಿಸಿರುವ ಬಗ್ಗೆ ರಾಜ್ಯ ಮಟ್ಟದಲ್ಲಿ ಪರಿಶೀಲಿಸಿ, ಕಾಲ ಕಾಲಕ್ಕೆ ಸೂಕ್ತ ನಿರ್ದೇಶನ ನೀಡುವುದು. | | | |

24/3/2021

ಪಿ.ಎನ್. ನಾಗರಾಜ್
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ

ಅನುಬಂಧ-2

## ಗುರುತಿನ ಚೀಟಿ

## ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇದ ಮತ್ತು ಅವರ ಪುನರ್ವಸತಿ ಕಾಯ್ದೆ ಮತ್ತು ನಿಯಮ 2013ರ ರೀತ್ಯಾ ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್

## As per the Prohibition of Employment as Manual Scavenger and their Rehabilitation Act and Rule 2013 Identified Manual Scavenger

ಹೆಸರು
Name ________________

ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಭಾವಚಿತ್ರ

ಸ್ಥಳೀಯ ಪ್ರಾಧಿಕಾರದ
ಹೆಸರು : ________________

ಎಂ.ಎಸ್ ಸಂಖ್ಯೆ
MS ID __________

ಸ್ಥಳೀಯ ಪ್ರಾಧಿಕಾರದ ಅಧಿಕಾರಿಯ

ಸಹಿ ಮತ್ತು ಪದನಾಮ

## ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಕುಟುಂಬದ ಸದಸ್ಯರ ವಿವರ

ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ನ
ಕುಟುಂಬದ ಸದಸ್ಯರನ್ನು ಒಳಗೊಂಡ ಭಾವಚಿತ್ರ

<u>ಕುಟುಂಬದ ಸದಸ್ಯರ ಹೆಸರು, ವಯಸ್ಸು, ಸಂಬಂಧ ಹಾಗೂ ಇತರೆ ವಿವರಗಳು</u>:-

1.
2.
3.
4.

<u>ವಿಳಾಸ</u> :-

<u>ಮೊಬೈಲ್ ಸಂಖ್ಯೆ</u> :-

<u>ಸ್ಥಳ</u> :-

<u>ದಿನಾಂಕ</u> :-

ಸ್ಥಳೀಯ ಪ್ರಾಧಿಕಾರದ ಅಧಿಕಾರಿಯ
ಸಹಿ ಮತ್ತು ಪದನಾಮ